ಕರ್ನಾಟಕ ಸರ್ಕಾರ
ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಯೋಜನೆ
C/o, ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001, ಕರ್ನಾಟಕ
E-mail ID: icps.kar@gmail.com Ph.No.080-22879381/82

ಸಂಖ್ಯೆ: ಕೆ.ಎಸ್.ಐ.ಸಿ.ಪಿ.ಎಸ್/ಸಿ.ಎನ್.ಸಿ.ಪಿ/ಎಮ್.ಟಿ.ಪಿ/71/2017-18 ದಿನಾಂಕ:12.12.2018

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

ವಿಷಯ: ಗರ್ಭವತಿಯಾದ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳಿಗೆ ಮೆಡಿಕಲ್ ಟರ್ಮಿನೇಷನ್ ನಡೆಸಲು ಸಲಹೆ ನೀಡಲು ಮೆಡಿಕಲ್ ಬೋರ್ಡ್ ರಚಿಸಿರುವ ಬಗ್ಗೆ.

ಉಲ್ಲೇಖ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆದೇಶ ಸಂ: ಆಕುಕ 359 ಎಂಪಿಎಸ್ 2018, ಬೆಂಗಳೂರು, ದಿನಾಂಕ:24.08.2018.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖದ ಆದೇಶದಲ್ಲಿ ಗೌರವಾನ್ವಿತ ಸರ್ವೋಚ್ಛ ನ್ಯಾಯಾಲಯವು ಗರ್ಭವತಿಯಾದ 20 ವಾರದೊಳಗಿನ ಪ್ರಕರಣಗಳಲ್ಲಿ MTP ನಡೆಸಲು ಕೋರಿಕೆ ಸಲ್ಲಿಸಿದ ಅಪ್ರಾಪ್ತ ವಯಸ್ಸಿನ ಹೆಣ್ಣುಮಕ್ಕಳಿಗೆ ಸಲಹೆ ನೀಡಲು ರಾಜ್ಯ ಮಟ್ಟದ ಪ್ರಥಮ ವೈದ್ಯಕೀಯ ಸೈನ್ಟಿಸ್ಟ್ ತಜ್ಞರನ್ನು ಒಳಗೊಂಡ ಮೆಡಿಕಲ್ ಬೋರ್ಡ್ ರಚನೆ ಮಾಡಲು ರಾಜ್ಯಗಳಿಗೆ ಸಲಹೆ ನೀಡಿರುವ ಹಿನ್ನಲೆಯಲ್ಲಿ ಉಲ್ಲೇಖದ ಆದೇಶದಲ್ಲಿ ಗರ್ಭವತಿಯಾದ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳಿಗೆ ಮೆಡಿಕಲ್ ಟರ್ಮಿನೇಷನ್ ನಡೆಸಲು ಸಲಹೆ ನೀಡುವ ಸಲುವಾಗಿ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳಲ್ಲಿ ಆಯಾ ಸಂಸ್ಥೆಗಳಲ್ಲಿನ ವೈದ್ಯಕೀಯ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಮೆಡಿಕಲ್ ಬೋರ್ಡ್ ರಚನೆಯಾಗಿರುತ್ತದೆ (ಪ್ರತಿ ಲಗತ್ತಿಸಿದೆ). ಇದನ್ನು ಅನುಸರಿಸಿ ಮುಂದಿನ ಸೂಕ್ತ ಕ್ರಮಕೈಗೊಳ್ಳಲು ತಿಳಿಸಿದೆ.

ತಮ್ಮ ವಿಶ್ವಾಸಿ,

15/12

ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.

ಪ್ರತಿಯನ್ನು:

1. ಅಧ್ಯಕ್ಷರು/ಸದಸ್ಯರು ಮಕ್ಕಳ ಕಲ್ಯಾಣ ಸಮಿತಿ ಎಲ್ಲಾ ಜಿಲ್ಲೆಗಳು, ರವರಿಗೆ ಮಾಹಿತಿಗಾಗಿ.
2. ಅಧೀಕ್ಷಕರು ಎಲ್ಲಾ ಬಾಲಕರ/ಬಾಲಕಿಯರ ಬಾಲಮಂದಿರಗಳು. ರವರಿಗೆ ಮಾಹಿತಿಗಾಗಿ.

MTP

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗರ್ಭವತಿಯಾದ ಅಪ್ರಾಪ್ತ ವಯಸ್ಸಿನ ಹೆಣ್ಣುಮಕ್ಕಳಿಗೆ ಮೆಡಿಕಲ್ ಟರ್ಮಿನೇಷನ್ ನಡೆಸಲು ಸಲಹೆ ನೀಡುವ ಸಲುವಾಗಿ ಮೆಡಿಕಲ್ ಬೋರ್ಡ್ ರಚಿಸುವ ಬಗ್ಗೆ.

ಪ್ರಸ್ತಾವನೆ:

ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯವು ಗರ್ಭವತಿಯಾದ 20 ವಾರಗಳೊಳಗಿನ ಪ್ರಕರಣಗಳಲ್ಲಿ ಮೆಡಿಕಲ್ ಟರ್ಮಿನೇಷನ್ ನಡೆಸಲು ಕೋರಿಕೆ ಸಲ್ಲಿಸುವ ಅಪ್ರಾಪ್ತ ವಯಸ್ಸಿನ ಹೆಣ್ಣುಮಕ್ಕಳಿಗೆ ಸಲಹೆ ನೀಡಲು ರಾಜ್ಯಮಟ್ಟದ ಪ್ರಮುಖ ವೈದ್ಯಕೀಯ ಸಂಸ್ಥೆಗಳಲ್ಲಿ ತಜ್ಞರನ್ನೊಳಗೊಂಡ ಮೆಡಿಕಲ್ ಬೋರ್ಡ್ ರಚಿಸುವಂತೆ ರಾಜ್ಯಗಳಿಗೆ ಸಲಹೆ ನೀಡಿರುತ್ತದೆ. ಭಾರತದ ಸಾಲಿಸಿಟರ್ ಜನರಲ್ ಇವರು ಹೆಣ್ಣುಮಕ್ಕಳ ಅಮೂಲ್ಯ ಜೀವವನ್ನು ಕಾಪಾಡುವ ಹಿತದೃಷ್ಟಿಯಿಂದ ತುರ್ತು ಗರ್ಭಪಾತ ಪ್ರಕರಣಗಳಲ್ಲಿ ಕ್ರಮಗಳನ್ನು ಕೈಗೊಳ್ಳಬೇಕಾದ ಪ್ರಕರಣಗಳಲ್ಲಿ ಸಲಹೆ ನೀಡಲು ರಾಜ್ಯ ಮಟ್ಟದ ವೈದ್ಯಕೀಯ ಸಂಸ್ಥೆಗಳಲ್ಲಿ ಮೆಡಿಕಲ್ ಬೋರ್ಡ್ ರಚಿಸಿರುವುದನ್ನು ಹಾಗೂ ಜಿಲ್ಲಾ ಮಟ್ಟದಲ್ಲಿ ಆಯುಕ್ತಾಲಯಗಳನ್ನು ರಚಿಸಿರುವುದನ್ನು ಕೇಂದ್ರ ಸರ್ಕಾರವು ಖಚಿತಪಡಿಸಿಕೊಳ್ಳುವಂತೆ ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯದ ಪರವಾಗಿ ಕೇಂದ್ರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯಕ್ಕೆ ಮನವಿ ಮಾಡಿರುತ್ತಾರೆ. ಈ ಹಿನ್ನೆಲೆಯಲ್ಲಿ, ಗೌರವಾನ್ವಿತ ನ್ಯಾಯಾಲಯಗಳಿಂದ ಕಳುಹಿಸಲ್ಪಡುವ ತುರ್ತು ಮೆಡಿಕಲ್ ಟರ್ಮಿನೇಷನ್ ಪ್ರಕರಣಗಳ ಪರಿಶೀಲನೆಗಾಗಿ ಹಾಗೂ ಇಂತಹ ಸೇವೆಗಳ ಅವಶ್ಯಕತೆಯುಳ್ಳ ಹೆಣ್ಣುಮಕ್ಕಳಿಗೆ ಸಲಹೆ ನೀಡುವ ಸಲುವಾಗಿ ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ತಜ್ಞರನ್ನೊಳಗೊಂಡ ಮೆಡಿಕಲ್ ಬೋರ್ಡ್ ರಚಿಸುವುದು ಅವಶ್ಯವಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ, ಗರ್ಭವತಿಯಾದ ಅಪ್ರಾಪ್ತ ವಯಸ್ಸಿನ ಹೆಣ್ಣುಮಕ್ಕಳಿಗೆ ಮೆಡಿಕಲ್ ಟರ್ಮಿನೇಷನ್ ನಡೆಸಲು ಸಲಹೆ ನೀಡುವ ಸಲುವಾಗಿ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳಲ್ಲಿ ಆಯಾ ಸಂಸ್ಥೆಗಳ ವೈದ್ಯಕೀಯ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ತಜ್ಞರನ್ನೊಳಗೊಂಡ ಮೆಡಿಕಲ್ ಬೋರ್ಡ್ ರಚನೆ ಮಾಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ:ಆಕುಕ 359 ಎಂಪಿಎಸ್ 2018, ಬೆಂಗಳೂರು, ದಿನಾಂಕ 24.08.2018

ಗರ್ಭವತಿಯಾದ ಅಪ್ರಾಪ್ತ ವಯಸ್ಸಿನ ಹೆಣ್ಣುಮಕ್ಕಳಿಗೆ ಮೆಡಿಕಲ್ ಟರ್ಮಿನೇಷನ್ ನಡೆಸಲು ಸಲಹೆ ನೀಡುವ ಸಲುವಾಗಿ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳಲ್ಲಿ ಆಯಾ ಸಂಸ್ಥೆಗಳಲ್ಲಿನ ವೈದ್ಯಕೀಯ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಕೆಳಕಂಡ ಸದಸ್ಯರುಗಳನ್ನೊಳಗೊಂಡ ಮೆಡಿಕಲ್ ಬೋರ್ಡ್ ರಚಿಸಿ ಆದೇಶಿಸಿದೆ.

| | | |
|---|---|---|
| 1. | ವೈದ್ಯಕೀಯ ಅಧೀಕ್ಷಕರು | ಅಧ್ಯಕ್ಷರು |
| 2. | ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ಜನರಲ್ ಮೆಡಿಸನ್ ವಿಭಾಗ | ಸದಸ್ಯರು |

| | | |
|---|---|---|
| 3. | ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ಪ್ರಸೂತಿ ಮತ್ತು ಸ್ತ್ರೀ ರೋಗ ವಿಭಾಗ | ಸದಸ್ಯರು |
| 4. | ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ಪೀಡಿಯಾಟ್ರಿಕ್ಸ್ ವಿಭಾಗ | ಸದಸ್ಯರು |
| 5. | ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ರೇಡಿಯಾಲಜಿ ವಿಭಾಗ | ಸದಸ್ಯರು |
| 6. | ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ಫೊರೆನ್ಸಿಕ್ ಮೆಡಿಸನ್ ವಿಭಾಗ | ಸದಸ್ಯರು |
| 6. | ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ಸೈಕಿಯಾಟ್ರಿ ವಿಭಾಗ | ಸದಸ್ಯರು |
| 7. | ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ಕಾರ್ಡಿಯಾಲಜಿ / ಪಲ್ಮನರಿ / ಪೆಥಾಲಜಿ / ಜನೆಟಿಕ್ಸ್ / ನ್ಯೂರೋಲಜಿ (ಆಯಾ ಸಂದರ್ಭಕ್ಕೆ ಅನುಸಾರವಾಗಿ) | ಆಹ್ವಾನಿತ ಸದಸ್ಯರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/8/18

(ತುಕಾರಾಮ್ ಕಲ್ಯಾಣಕರ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ಮಹಾಲೇಖಪಾಲರು (ಲೆಕ್ಕಪತ್ರ / ಲೆಕ್ಕಪರಿಶೋಧನೆ 1 ಮತ್ತು 2), ಕರ್ನಾಟಕ, ಬೆಂಗಳೂರು.560001.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು-560001.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-560009.
4. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-09.
5. ನಿರ್ದೇಶಕರು, ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ.
6. ನಿರ್ದೇಶಕರು ಹಾಗೂ ಡೀನ್, ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.
7. ನಿರ್ದೇಶಕರು ಹಾಗೂ ಡೀನ್, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು-570021.
8. ನಿರ್ದೇಶಕರು, ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ-580022.
9. ನಿರ್ದೇಶಕರು, ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ-583104.
10. ನಿರ್ದೇಶಕರು, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ-571401.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)
ಬಹುಮಹಡಿ ಕಟ್ಟಡ, ಬೆಂಗಳೂರು
ಪತ್ರ ಕಳುಹಿಸಿದ ದಿನಾಂಕ 29/8/18

11. ನಿರ್ದೇಶಕರು, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ–573201.
12. ನಿರ್ದೇಶಕರು, ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ–577201.
13. ನಿರ್ದೇಶಕರು, ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ–590001.
14. ನಿರ್ದೇಶಕರು, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್–585401.
15. ನಿರ್ದೇಶಕರು, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು–584102.
16. ನಿರ್ದೇಶಕರು, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ.
17. ನಿರ್ದೇಶಕರು, ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಲ್ಬುರ್ಗಿ.
18. ನಿರ್ದೇಶಕರು, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ.
19. ನಿರ್ದೇಶಕರು, ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ
20. ನಿರ್ದೇಶಕರು, ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ.
21. ನಿರ್ದೇಶಕರು, ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ
22. ನಿರ್ದೇಶಕರು, ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು–560029.
23. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.

31/8/18 3.10 pm